ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 14/02/2020

₹ 5.00 ಮಣಿಪಾಲ | ಬೆಂಗಳೂರು | ಹುಬ್ಬಳ್ಳಿ | ಕಲಬುರಗಿ | ದಾವಣಗೆ

# ಕ್ರಿಮಿನಲ್ ವಿವರ ನೀಡಿ

ಉದಯ 14/2/20

## ರಾಜಕಾರಣದಲ್ಲಿ ಅಪರಾಧೀಕರಣ ಹೆಚ್ಚಳಕ್ಕೆ ಸುಪ್ರೀಂ ಕಳವಳ
## ಕ್ರಿಮಿನಲ್ ಆರೋಪ ಹೊತ್ತವರ ವಿವರ ಬಹಿರಂಗಕ್ಕೆ ಖಡಕ್ ಆದೇಶ

**ನವದೆಹಲಿ:** ಸಂಸತ್ ಮತ್ತು ವಿಧಾನಸಭೆಗಳಿಗೆ ಕ್ರಿಮಿನಲ್ ಹಿನ್ನೆಲೆಯುಳ್ಳವರು ಹೆಚ್ಚಾಗಿ ಆರಿಸಿಬರುತ್ತಿರುವುದಕ್ಕೆ ಕಳವಳ ವ್ಯಕ್ತಪಡಿಸಿರುವ ಸುಪ್ರೀಂಕೋರ್ಟ್, 'ಅಪರಾಧ ಹಿನ್ನೆಲೆ'ಯುಳ್ಳವರನ್ನೇ ಅಭ್ಯರ್ಥಿಗಳಾಗಿ ಆರಿಸಲು ಕಾರಣಗಳೇನು ಎಂಬ ಬಗ್ಗೆ ತಿಳಿಸಿ ಎಂದು ಎಲ್ಲ ರಾಜಕೀಯ ಪಕ್ಷಗಳಿಗೆ ಸೂಚಿಸಿದೆ.

ಈ ಸಂಬಂಧ ನಿಮ್ಮ ವೆಬ್‌ಸೈಟ್‌ಗಳಲ್ಲಿ, ಟ್ವಿಟರ್ ಮತ್ತು ಫೇಸ್‌ಬುಕ್ ಖಾತೆಗಳಲ್ಲಿ ಹಾಗೂ ಪತ್ರಿಕೆಗಳಲ್ಲಿ ಜಾಹೀರಾತು ರೂಪದಲ್ಲಿ ಜನರಿಗೆ ಅರುಹುವಂತೆಯೂ ಸುಪ್ರೀಂಕೋರ್ಟ್ ಕಟ್ಟುನಿಟ್ಟಿನ ಆದೇಶ ನೀಡಿದೆ. ವಕೀಲ ಮತ್ತು ಬಿಜೆಪಿ ನಾಯಕ ಅಶ್ವಿನಿ ಕುಮಾರ್ ಉಪಾಧ್ಯಾಯ್ ಮತ್ತು ಇತರರು ಸಲ್ಲಿಸಿರುವ ನ್ಯಾಯಾಂಗ ನಿಂದನೆ ಅರ್ಜಿ ವಿಚಾರಣೆ ನಡೆಸಿದ ನ್ಯಾ. ರೋಹಿಂಟನ್ ಫಾಲಿ ನಾರಿಮನ್ ನೇತೃತ್ವದ ನ್ಯಾಯಪೀಠ ಗುರುವಾರ ಈ ನಿರ್ದೇಶನ ನೀಡಿದೆ.

**ಸಂಪೂರ್ಣ ವಿವರ ಕೊಡಿ:** ಇದಷ್ಟೇ ಅಲ್ಲ, ಕ್ರಿಮಿನಲ್ ಕೇಸ್‌ಗಳಲ್ಲಿ ಭಾಗಿಯಾಗಿರುವ ಶಾಸಕ ಅಥವಾ ಸಂಸದರು ನಿಮ್ಮ ಪಕ್ಷದಲ್ಲಿ ಎಷ್ಟು ಜನರಿದ್ದಾರೆ, ಇನ್ನೂ ಎಷ್ಟು ಮಂದಿ ವಿರುದ್ಧ ಪ್ರಕರಣಗಳು ಬಾಕಿ ಇವೆ, ಕ್ರಿಮಿನಲ್ ಕೇಸ್ ಬಾಕಿ ಇದ್ದ ಹೊರತಾಗಿಯೂ ಅವರಿಗೆ ನೀವು ಟಿಕೆಟ್ ನೀಡಿದ್ದೇಕೆ? ಈ ಕುರಿತು ಮಾಹಿತಿ ನೀಡಿ ಎಂದು ಕೋರ್ಟ್ ಸೂಚಿಸಿದೆ.


ರಾಜಕೀಯ ಅಪರಾಧೀಕರಣ ಹೆಚ್ಚುತ್ತಿರುವ ಬಗ್ಗೆ ಆತಂಕ ವ್ಯಕ್ತಪಡಿಸಿರುವ ಪೀಠ, ಗಂಭೀರ ಸ್ವರೂಪದ ಅಪರಾಧ ಪ್ರಕರಣಗಳು ಇದ್ದರೂ ಅಭ್ಯರ್ಥಿಗಳು ಚುನಾವಣೆಗೆ ಸ್ಪರ್ಧಿಸಲು ಅವಕಾಶ ನೀಡಿದ್ದೇಕೆ? ಎಂದು ಪ್ರಶ್ನಿಸಿದೆ. ಅಲ್ಲದೆ, ಕ್ರಿಮಿನಲ್ ಕೇಸು ಇರುವ, ಆಯ್ಕೆಯಾದ ಜನಪ್ರತಿನಿಧಿಗಳ ಮಾಹಿತಿಯನ್ನು 48 ಗಂಟೆಗಳ ಒಳಗಾಗಿ ಪಕ್ಷದ ವೆಬ್‌ಸೈಟ್, ಸಾಮಾಜಿಕ ಜಾಲತಾಣಗಳು, ಒಂದು ಸ್ಥಳೀಯ ಪತ್ರಿಕೆ ಹಾಗೂ ರಾಷ್ಟ್ರೀಯ ಪತ್ರಿಕೆಯಲ್ಲಿ ಪ್ರಕಟಿಸಬೇಕು. ಹಾಗೇ, ಇಂಥ ಅಭ್ಯರ್ಥಿಗಳನ್ನು ಸ್ಪರ್ಧೆಗೆ ಆಯ್ಕೆ ಮಾಡಿದ 72 ಗಂಟೆಗಳ ಒಳಗಾಗಿ ಚುನಾವಣಾ ಆಯೋಗಕ್ಕೆ ವರದಿ ಸಲ್ಲಿಸಬೇಕು ಎಂದು ಆದೇಶಿಸಿದೆ.

**ಮೊದಲೇ ಉಲ್ಲಂಘನೆ:** ಸುಪ್ರೀಂಕೋರ್ಟ್ ನಿರ್ದೇಶನದ ಬಗ್ಗೆ ಪ್ರತಿಕ್ರಿಯೆ ನೀಡಿರುವ ಕಾಂಗ್ರೆಸ್, ಕರ್ನಾಟಕದಲ್ಲಿ ಗಣಿ ಅಕ್ರಮದಲ್ಲಿ ಮೊಕದ್ದಮೆ ಎದುರಿಸುತ್ತಿರುವ ಸಚಿವ ಆನಂದ್ ಸಿಂಗ್‌ಗೆ ಅರಣ್ಯ ಖಾತೆ ನೀಡಲಾಗಿದೆ. ಸುಪ್ರೀಂಕೋರ್ಟ್ ನಿರ್ದೇಶನ ಬರುವ ಮೊದಲೇ ಪ್ರಧಾನಿ ನರೇಂದ್ರ ಮೋದಿಯವರು ಅದನ್ನು ಉಲ್ಲಂಘಿಸಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದೆ.

ನಿರ್ದೇಶನ ನೀಡಿದೆ. ಆದರೆ, ಅಪರಾಧ ಹಿನ್ನೆಲೆ ಉಳ್ಳವರನ್ನು ಶಾಸಕ ಮಾತ್ರವಲ್ಲ ಸಚಿವರನ್ನಾಗಿ ಕೂಡ ಮಾಡುತ್ತೇವೆ ಎಂದು ಪ್ರಧಾನಿ ತೋರಿಸಿಕೊಟ್ಟಿದ್ದಾರೆ. ಹಾಗಾದರೆ, ಪ್ರಧಾನಿ, ಕರ್ನಾಟಕ ಮುಖ್ಯಮಂತ್ರಿ ವಿರುದ್ಧ ಸುಪ್ರೀಂ ನ್ಯಾಯಾಂಗ ನಿಂದನೆ ಮೊಕದ್ದಮೆ ದಾಖಲಿಸುವುದೇ?' ಎಂದು ಪ್ರಶ್ನಿಸಿದ್ದಾರೆ.

ವಿರುದ್ಧದ ರಾಹುಲ್ ಗಾಂಧಿ ಅವರ ಹೋರಾಟಕ್ಕೆ ಪೂರಕವಾಗಿ ಸುಪ್ರೀಂ ತೀರ್ಪು ನೀಡಿದೆ ಎಂದಿದ್ದಾರೆ.

**ಬಿಜೆಪಿ ಸ್ವಾಗತ:** ಸುಪ್ರೀಂಕೋರ್ಟ್ ನಿರ್ದೇಶನವನ್ನು ಬಿಜೆಪಿ ನಿಲುವನ್ನು ಸ್ವಾಗತಿಸಿದ್ದು 'ಚುನಾವಣಾ ಪ್ರಜಾಪ್ರಭುತ್ವ



### ಕ್ರಿಮಿನಲ್ ಹಿನ್ನೆಲೆಯ ಸಂಸತ್ ಸದಸ್ಯರು

| ವರ್ಷ | ಶೇಕಡಾ |
|---|---|
| 2004 | 24% |
| 2009 | 30% |
| 2014 | 34% |
| 2019 | 43% |

### ಗೆಲ್ಲುವ ಅಂಶವೇ ಪ್ರಧಾನವಲ್ಲ

ಚುನಾವಣೆಯಲ್ಲಿ ನಿಗದಿತ ಅಭ್ಯರ್ಥಿಗಳು ಗೆಲ್ಲಲೇಬೇಕು. ಹಿಂದಿನ ಚುನಾವಣೆಯಲ್ಲಿ ಜಯ ಸಾಧಿಸಿದ್ದಾರೆ ಎಂಬ ಅಂಶಗಳು ಪ್ರಧಾನವಾಗ ಕೂಡದು. ಅವರು ಸಮಾಜಕ್ಕಾಗಿ ನೀಡಿರುವ ಕೊಡುಗೆ ಏನು ಎಂಬುದು ಅವರ ಸಾಧನೆ ನಿರ್ಧರಿಸುವ ಅಂಶವಾಗಬೇಕು ಎಂದು ಸುಪ್ರೀಂಕೋರ್ಟ್ ಕಟುವಾಗಿ ಅಭಿಪ್ರಾಯಪಟ್ಟಿದೆ. ಒಂದೊಮ್ಮೆ ರಾಜಕೀಯ ಪಕ್ಷಗಳು ಮಾಹಿತಿ ನೀಡದಿದ್ದರೆ ಮತ್ತು ಈ ನಿರ್ದೇಶನವನ್ನು ಜಾರಿಗೊಳಿಸಲು ವಿಫಲವಾದರೆ ಅದನ್ನು ನ್ಯಾಯಾಂಗ ನಿಂದನೆ ಎಂದು ಚುನಾವಣಾ ಆಯೋಗ ಪರಿಗಣಿಸಬೇಕು ಎಂದು ಹೇಳಿದೆ.

### ಸುಪ್ರೀಂ ಕೋರ್ಟ್‌ನ ಆರು ನಿರ್ದೇಶನಗಳು

1. ರಾಜ್ಯ, ರಾಷ್ಟ್ರ ಮಟ್ಟದ ರಾಜಕೀಯ ಪಕ್ಷಗಳು ತಮ್ಮ ಅಭ್ಯರ್ಥಿಗಳ ವಿರುದ್ಧ ಬಾಕಿ ಇರುವ ಕ್ರಿಮಿನಲ್ ಪ್ರಕರಣಗಳ ಮಾಹಿತಿಯನ್ನು (ಅಪರಾಧಗಳ ಸ್ವರೂಪ, ಆರೋಪ ಸಾಬೀತು, ವಿಚಾರಣೆ ನಡೆಸುತ್ತಿರುವ ನ್ಯಾಯಾಲಯ, ಕೇಸ್ ಸಂಖ್ಯೆ) ತಮ್ಮ ವೆಬ್‌ಸೈಟ್‌ಗಳಲ್ಲಿ ವಿವರವಾಗಿ ಪ್ರಕಟಿಸಬೇಕು.
2. ಚುನಾವಣೆ 'ಗೆಲುವು' ಹೊರತಾಗಿ ಅಭ್ಯರ್ಥಿಯು ಸ್ಪರ್ಧೆಗೆ 'ಅರ್ಹ' ಎಂದು ಪರಿಗಣಿಸಲು ಇರುವ ಕಾರಣಗಳೇನು?
3. ಈ ಮಾಹಿತಿಯನ್ನು ಒಂದು ಸ್ಥಳೀಯ ಪತ್ರಿಕೆ, ಒಂದು ರಾಷ್ಟ್ರೀಯ ಪತ್ರಿಕೆ, ಫೇಸ್‌ಬುಕ್, ಟ್ವಿಟರ್ ರೀತಿಯ ಸಾಮಾಜಿಕ ಜಾಲತಾಣಗಳಲ್ಲಿನ ಪಕ್ಷಗಳ ಅಧಿಕೃತ ವೇದಿಕೆಯಲ್ಲಿ ಪ್ರಕಟಿಸಬೇಕು.
4. ಅಭ್ಯರ್ಥಿಯನ್ನು ಸ್ಪರ್ಧೆಗೆ ಆಯ್ಕೆ ಮಾಡಿದ 48 ಗಂಟೆ ಒಳಗಾಗಿ ಅಥವಾ ನಾಮಪತ್ರ ಸಲ್ಲಿಕೆ ಆರಂಭವಾದ ಮೊದಲ ದಿನಕ್ಕೆ 2 ವಾರ ಮುಂಚಿತವಾಗಿ ಮಾಹಿತಿ ಪ್ರಕಟಗೊಳ್ಳಬೇಕು
5. ಪ್ರಸ್ತುತ ನಿರ್ದೇಶನದಲ್ಲಿ ಸೂಚಿಸಿರುವ ಅಂಶಗಳನ್ನು ಅಭ್ಯರ್ಥಿಯನ್ನು ಆಯ್ಕೆ ಮಾಡಿದ 72 ಗಂಟೆಗಳ ಒಳಗಾಗಿ ಚುನಾವಣಾ ಆಯೋಗಕ್ಕೆ ಸಲ್ಲಿಸಬೇಕು.
6. ನ್ಯಾಯಾಲಯದ ನಿರ್ದೇಶನದ ಅನುಸಾರ ಮಾಹಿತಿ ನೀಡಲು ರಾಜಕೀಯ ಪಕ್ಷಗಳು ವಿಫಲವಾದರೆ, ಅದನ್ನು ನ್ಯಾಯಾಂಗ ನಿಂದನೆ ಎಂದು ಪರಿಗಣಿಸಲಿದ್ದು, ಚುನಾವಣಾ ಆಯೋಗ ಅದನ್ನು ಕೂಡಲೇ ಕೋರ್ಟ್ ಗಮನಕ್ಕೆ ತರಬೇಕು.